ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE : 24/3/2020

# ಇಡೀ ರಾಜ್ಯವೇ ಲಾಕ್‌ಡೌನ್

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

24/3/2020

ಕರೋನಾದಿಂದ ಇಡೀ ರಾಜ್ಯವನ್ನು ತಪ್ಪಿಸಲು ಸಂಪೂರ್ಣ ರಾಜ್ಯವನ್ನು ಲಾಕ್‌ಡೌನ್ ಮಾಡುವುದಕ್ಕೆ ಮೀನಾಮೇಷ ಎಣಿಸಿದ್ದ ಸರಕಾರ, ಕೊನೆಗೂ ಲಾಕ್‌ಡೌನ್ ಮಾಡಿದೆ.

ದಿನದಿಂದ ದಿನಕ್ಕೆ ಕರೋನಾ ಸೋಂಕು ಹೆಚ್ಚಾಗುತ್ತಿದ್ದಂತೆ ಕೇವಲ ಒಂಬತ್ತು ಜಿಲ್ಲೆಗಳ ಬದಲಿಗೆ ಇಡೀ ರಾಜ್ಯವನ್ನು ಲಾಕ್‌ಡೌನ್ ಮಾಡಬೇಕು ಎನ್ನುವ ಆಗ್ರಹ ರಾಜ್ಯದೆಲ್ಲೆಡೆ ಕೇಳಿಬಂದಿತ್ತು. ಆದರೆ ಇದರಿಂದ ಆಗಬಹುದಾದ ಸಮಸ್ಯೆಯನ್ನು ಗಮನದಲ್ಲಿರಿಸಿಕೊಂಡು ರಾಜ್ಯ ಸರಕಾರ ಇದಕ್ಕೆ ಅವಕಾಶ ನೀಡಿರಲಿಲ್ಲ. ಆದರೆ ಇದೀಗ ಲಾಕ್‌ಡೌನ್ ಆಗದಿದ್ದರೆ ಭಾರಿ ಸಮಸ್ಯೆ ಎದುರಾಗುವುದು ಖಚಿತವಾಗಿರುವುದರಿಂದ ಲಾಕ್‌ಡೌನ್ ಮಾಡುವುದಕ್ಕೆ ಆದೇಶ ಹೊರಡಿಸಿದೆ.

ಸೋಮವಾರ ಬೆಳಗ್ಗೆಯಿಂದ ಮುಖ್ಯಮಂತ್ರಿ ಯಡಿಯೂರಪ್ಪ ಅವರು ಸಾಲು ಸಾಲು ಸಭೆ ನಡೆಸಿದ್ದರು. ಆರೋಗ್ಯ ಕ್ಷೇತ್ರದ ತಜ್ಞರು, ಕೆಲ ಸಚಿವರು ರಾಜ್ಯವನ್ನು ಲಾಕ್‌ಡೌನ್ ಮಾಡುವುದು ಸೂಕ್ತ ಎನ್ನುವ ಮಾತನ್ನು ಹೇಳಿದ್ದರು. ಆದರೆ ಸಂಪೂರ್ಣ ಲಾಕ್‌ಡೌನ್ ಮಾಡುವುದಕ್ಕೆ ಕೆಲವರು ಆಕ್ಷೇಪ ವ್ಯಕ್ತಪಡಿಸಿದ್ದರು. ಆದರೆ ಅಂತಿಮವಾಗಿ ಇದೀಗ ಮಾ.31ರವರೆಗೆ ಲಾಕ್‌ಡೌನ್ ಮಾಡಲು ಸರ್ಕಾರ ಆದೇಶ ಹೊರಡಿಸಿದೆ.

**ಜನರ ಪ್ರತಿಕ್ರಿಯೆಯೇ ಲಾಕ್‌ಡೌನ್‌ಗೆ ಕಾರಣ:** ಭಾನುವಾರ 9 ಜಿಲ್ಲೆಗಳಲ್ಲಿ ಮಾತ್ರ ಲಾಕ್‌ಡೌನ್ ವಿಸ್ತರಣೆ ಮಾಡಲಾಗಿತ್ತು. ಆದರೆ, ಈ ಬಗ್ಗೆ ಸಾರ್ವಜನಿಕರಿಂದ ಸರಿಯಾದ ಪ್ರತಿಕ್ರಿಯೆ ಹಾಗೂ ಎಚ್ಚೆತ್ತುಕೊಳ್ಳದ ಕಾರಣ ರಾಜ್ಯಾದ್ಯಂತ ವಿಸ್ತರಣೆ ಮಾಡಲು ಸರಕಾರ ನಿರ್ಧರಿಸಿದೆ.

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಸೋಮವಾರ ತುರ್ತು ಸಭೆ ಸೇರಿ ರಾಜ್ಯಾದ್ಯಂತ ಲಾಕ್‌ಡೌನ್ ಮಾಡುವ ಸಂಬಂಧ ಸಂಪುಟದ ಸಹೋದ್ಯೋಗಿಗಳು ಹಾಗೂ ಹಿರಿಯ ಅಧಿಕಾರಿಗಳ ಜತೆ ಸಮಾಲೋಚನೆ ನಡೆಸಿದರು.



## ಶೇ.1ರಷ್ಟು ಹಬ್ಬಿದರೂ ಆಪತ್ತು ಫಿಕ್ಸ್

**ಈಗಾಗಲೇ ವಿದೇಶದಿಂದ ಕಳೆದೊಂದು ತಿಂಗಳಲ್ಲಿ ಕರ್ನಾಟಕಕ್ಕೆ ಮೂವತ್ತು ಸಾವಿರಕ್ಕೂ ಹೆಚ್ಚು ಜನರು ಆಗಮಿಸಿರುವ ಅಂದಾಜು ಇದೆ. ಇದಕ್ಕೆ ಪೂರಕ ಎನ್ನುವ ರೀತಿಯಲ್ಲಿ ಬೆಂಗಳೂರು ಒಂದರಲ್ಲೇ 22 ಸಾವಿರ ಮಂದಿಯನ್ನು ಹೋಂ ಕ್ವಾರಂಟೈನ್ ಮಾಡಲಾಗಿದೆ ಎಂದು ಬಿಬಿಎಂಪಿ ಆಯುಕ್ತರು ಮಾಹಿತಿ ನೀಡಿದ್ದಾರೆ. ಇದರಿಂದ ಒಂದು ವೇಳೆ ಶೇ.1ರಷ್ಟು ಸೋಂಕು ಹರಡಿದರೂ ಭಾರಿ ಅನಾಹುತವಾಗುವ ಸಾಧ್ಯತೆ ಇದೆ ಎನ್ನುವ ಮಾತುಗಳು ಕೇಳಿಬಂದಿವೆ. ಈ ಎಲ್ಲವನ್ನು ಗಮನದಲ್ಲಿರಿಸಿಕೊಂಡು ಲಾಕ್‌ಡೌನ್ ಮಾಡಿದೆ.**



**ಕರೋನಾ ಸೋಂಕು ಹರಡುವ ಪರಿಸ್ಥಿತಿಯ ಗಂಭೀರತೆಯನ್ನು ಅರಿತು, ಈ ಹಿಂದೆ 9 ಜಿಲ್ಲೆಗಳಿಗೆ ಮಾತ್ರ ಅನ್ವಯಿಸಲಾಗಿದ್ದ ನಿರ್ಬಂಧವನ್ನು ಇಡೀ ರಾಜ್ಯಕ್ಕೆ ವಿಸ್ತರಿಸಲಾಗಿದೆ. ಜನರು ಯಾವುದೇ ಕಾರಣಕ್ಕೂ ಆತಂಕಕ್ಕೆ ಒಳಗಾಗಬಾರದು. ಅಗತ್ಯ ವಸ್ತುಗಳ ಪೂರೈಕೆಯಲ್ಲಿ ಯಾವುದೇ ವ್ಯತ್ಯಯವಾಗದಂತೆ ಕ್ರಮ ಕೈಗೊಳ್ಳಲಾಗುವುದು.**

**- ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿ**

**ಅನಾಹುತ ತಪ್ಪಿಸಲು ಈ ಕ್ರಮ:** ಇಡೀ ರಾಜ್ಯವನ್ನು ವಾರದ ಕಾಲ ಬಂದ್ ಮಾಡುವುದರಿಂದ ಸಾಮಾಜಿಕ, ಆರ್ಥಿಕವಾಗಿ ಕರ್ನಾಟಕಕ್ಕೆ ಭಾರಿ ಹೊಡೆತ ಬೀಳುವುದು ಖಚಿತ. ಇದರಲ್ಲಿ ಯಾವುದೇ ಅನುಮಾನವಿಲ್ಲ. ಆದರೆ ಇಂದಿನ ಸಮಸ್ಯೆ ಅಥವಾ ಆರ್ಥಿಕ ಹಿಂಜರಿತಕ್ಕೆ ಬೆದರಿ ಲಾಕ್‌ಡೌನ್ ಮಾಡುವುದನ್ನು ಕೈಬಿಟ್ಟರೆ ಕರೋನಾ ಇಡೀ ರಾಜ್ಯಕ್ಕೆ ಹಬ್ಬಿದರೆ ಮುಂದಾಗುವ ಅನಾಹುತವನ್ನು ತಪ್ಪಿಸಲು ಈ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಲಾಗಿದೆ.

ಕರೋನಾ ಒಬ್ಬರಿಂದ ಒಬ್ಬರಿಗೆ ಹಬ್ಬುವುದು ಸುಲಭವಾಗಿರುವುದರಿಂದ, ಜನತಾ ಕರ್ಫ್ಯೂ ಮಾದರಿಯಲ್ಲಿ ಇಡೀ ರಾಜ್ಯವನ್ನು ವಾರದ ಮಟ್ಟಿಗೆ ಮುಚ್ಚಿದಾಗ ಮಾತ್ರ ನಿಯಂತ್ರಣಕ್ಕೆ ಬರಲು ಸಾಧ್ಯವಾಗುತ್ತದೆ. ಅದಕ್ಕಾಗಿ ಈಗಾಗಲೇ ನೆರೆರಾಜ್ಯಗಳಾದ ಮಹಾರಾಷ್ಟ್ರ, ಕೇರಳ, ತೆಲಂಗಾಣ, ತಮಿಳುನಾಡು ಸೇರಿದಂತೆ ರಾಷ್ಟ್ರ ರಾಜಧಾನಿ ದೆಹಲಿ, ರಾಜಸ್ಥಾನ, ಜಮ್ಮು ಕಾಶ್ಮೀರ ಸೇರಿದಂತೆ ಒಟ್ಟು 14 ರಾಜ್ಯಗಳು ಲಾಕ್‌ಡೌನ್ ಆಗಿವೆ. ಇದೀಗ ಈ ಸಾಲಿಗೆ ಕರ್ನಾಟಕವೂ ಸೇರಿದೆ.